ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ನಬಾರ್ಡ್ ಯೋಜನೆಯಡಿ ಪ್ರತಿ ಸಾಲಿನಲ್ಲಿ ಕಾಮಗಾರಿಗಳನ್ನು ಹಂತಹಂತವಾಗಿ ಮಂಜೂರು ಮಾಡಲಾಗುತ್ತಿದ್ದು ಇಲಾಖಾ ನಿಯಮಾವಳಿ ಅನುಸರಿಸಿ ಗುತ್ತಿಗೆ ಆಧಾರದ ಮೇಲೆ ಕೈಗೊಳ್ಳಲಾಗುತ್ತಿದೆ. ಈ ಸಾಲಿನಲ್ಲಿ ಬಿದ್ದ ಭಾರಿ ಮಳೆಯಿಂದಾಗಿ ಪ್ರಗತಿ ಕುಂಠಿತವಾಗಿದೆ.

ಆ) ಕಾಮಗಾರಿಗಳನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು ಕುಂಠಿತ ಪ್ರಗತಿ ನೀಡುತ್ತಿರುವ ಗುತ್ತಿಗೆದಾರರಿಗೆ ನಿಯಮಾವಳಿಯಂತೆ ದಂಡ ವಿಧಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ತಿಪಟೂರು ನಗರದ ರಸ್ತೆಗಳ ದುರಸ್ಥಿ

2289 - ಶ್ರೀ ಬಿ. ನಂಜಾಮರಿ (ತಿಪಟೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ತಿಪಟೂರು ನಗರದಲ್ಲಿ ಮಳೆಯ ಅತಿವೃಷ್ಟಿಯಿಂದ ಎಲ್ಲಾ ರಸ್ತೆಗಳು ಹಾಳಾಗಿದ್ದು, ಸಂಚಾರಕ್ಕೆ ಯೋಗ್ಯವಾಗಿಲ್ಲವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಆ ಬಗ್ಗೆ ಕೈಗೊಂಡ ಕ್ರಮಗಳೇನು?*

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಹಲವೆಡೆ ರಸ್ತೆ ಹಾಳಾಗಿದ್ದು, ಗಮನಕ್ಕೆ ಬಂದಿದೆ.

ಆ) ವಾರ್ಷಿಕ ನಿರ್ವಹಣೆಯ ಲಭ್ಯವಿರುವ ಅನುದಾನದಲ್ಲಿ ದುರಸ್ತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಆರ್ಥಿಕ ಮಿತವ್ಯಯ

2289A - ಶ್ರೀ ಬಿ. ನಂಜಾಮರಿ (ತಿಪಟೂರು) : ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಆರ್ಥಿಕ ಮಿತವ್ಯಯ ಯಾವಾಗ ಜಾರಿ ಬಂದಿದೆ ಮತ್ತು ಈಗಲೂ ಸಹ ಜಾರಿಯಲ್ಲಿದೆಯೇ? ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?*

ಆ) *ಯಾವ ಯಾವ ಇಲಾಖೆಗಳಲ್ಲಿ ಆರ್ಥಿಕ ಮಿತವ್ಯಯ ಜಾರಿಯಲ್ಲಿದೆ ಮತ್ತು ಯಾವ ಯಾವ ಇಲಾಖೆಗಳಲ್ಲಿ ಅದನ್ನು ಮನ್ನಾ ಮಾಡಲಾಗಿದೆ.*

ಇ) *ಶಿಕ್ಷಣ ಇಲಾಖೆಯು ಭೋಧಕೇತರರಿಗೆ ಆರ್ಥಿಕ ಮಿತವ್ಯಯ ಆದೇಶವನ್ನು ರದ್ದುಪಡಿಸಲು ಸರ್ಕಾರ ತೀರ್ಮಾನಿಸಿದೆಯೆ, 1-6-92ರೊಳಗೆ ನೇಮಕಗೊಂಡು ಅನುಮೋದನೆಯಿಂದ ಭೋಧಕೇತರರಿಗೆ ಇದನ್ನು ಮನ್ನಾ ಮಾಡಿ ಸಂಬಳ ವೇತನ ನೀಡಲಾಗುವುದೇ?*